# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 717 |
| ಸದಸ್ಯರ ಹೆಸರು | ಡಾ: ತೇಜಸ್ವಿನಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.12.2018 |
| ಉತ್ತರಿಸುವ ಸಚಿವರು | ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಡಳಿತದಲ್ಲಿ ಕನ್ನಡ ಬಳಕೆಯ ಅನುಷ್ಠಾನ ಯಾವ ಪ್ರಮಾಣದಲ್ಲಿ ಆಗಿದೆ: | ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿ ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ತನ್ನ ಕಾರ್ಯವ್ಯಾಪ್ತಿಯಲ್ಲಿ ನಿರಂತರವಾಗಿ ಪರಿಶೀಲನ ಕ್ರಮವನ್ನು ನಿರ್ವಹಿಸುತ್ತಿರುತ್ತದೆ. ಇದು ಸಾರ್ವಕಾಲೀಕ ಪರಾಮರ್ಶೆಗೊಳಪಡುವ ಪ್ರಕ್ರಿಯೆಯಾಗಿರುವ ಹಿನ್ನೆಲೆಯಲ್ಲಿ, ಪ್ರಮಾಣದ ಅಂಕಿ ಅಂಶಗಳನ್ನು ನಿಖರವಾಗಿ ಅಂದಾಜಿಸಲು ಅವಕಾಶವಿರುವುದಿಲ್ಲ ಅದಾಗ್ಯೂ, ಪ್ರಾಧಿಕಾರದ ಲಭ್ಯ ಅಂಕಿ ಅಂಶಗಳನುಸಾರ ಇಂದಿನ ದಿನಾಂಕಕ್ಕೆ ಕ್ಷೇತ್ರ ಇಲಾಖೆಗಳಲ್ಲಿ ಶೇ. 90ಕ್ಕೂ ಮೀರಿದಂತೆ ಆಡಳಿತದಲ್ಲಿ ಕನ್ನಡ ಅನುಷ್ಠಾನ ಆಗಿರುತ್ತದೆ. ಸಚಿವಾಲಯ ಮಟ್ಟದಲ್ಲಿ ಸುಧಾರಣೆಯಾಗಬೇಕಾದ ಅವಶ್ಯಕತೆವಿರುತ್ತದೆ. ತಂತ್ರಜ್ಞಾನದಲ್ಲಿ ಕನ್ನಡ ಅನುಷ್ಠಾನಕ್ಕೆ ಆಡಳಿತ ಇಲಾಖೆಗಳು ಸಾಕಷ್ಟು ಸಿದ್ಧತೆ ನಡೆಸಬೇಕಿದ್ದು, ಈ ಕುರಿತಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ 2017ರಲ್ಲಿ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದೆ. ಇದನ್ನು ಅನುಷ್ಠಾನಗೊಳಿಸುವ ಮೇಲ್ವಿಚಾರಣೆಯನ್ನು ಇ-ಆಡಳಿತ ಇಲಾಖೆಯು ನಿರ್ವಹಿಸಬೇಕಿದೆ. |
| ಆ) | ಕನ್ನಡಕ್ಕೆ ಕೇಂದ್ರದಿಂದ ಶಾಸ್ತ್ರೀಯ 'ಸ್ಥಾನಮಾನ' ಲಭಿಸಿದ ನಂತರ ಕಂಡು ಬಂದಿರುವ ಪ್ರಗತಿ ಏನು: (ಕೇಂದ್ರ/ರಾಜ್ಯಗಳ ಅನುದಾನದ ವಿವರ ನೀಡುವುದು) | ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ:ನಂ.2-16/2004 ಅಕಾಡೇಮಿಸ್, ದಿನಾಂಕ:31.10.2008ರನ್ವಯ ಕನ್ನಡ ಭಾಷೆಯನ್ನು ಶಾಸ್ತ್ರೀಯ ಭಾಷೆಯೆಂದು ಘೋಷಿಸಿದೆ. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:ಎಫ್.ನಂ.-8-81/2009-ಲಾಂಗ್ವೆಜ್-2, ದಿನಾಂಕ:29.09.2011ರ ಅನ್ವಯ ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ಅಧೀನದಲ್ಲಿ ಕನ್ನಡ ಶಾಸ್ತ್ರೀಯ ಭಾಷಾ ಉನ್ನತ ಅಧ್ಯಯನ ಕೇಂದ್ರವನ್ನು ಸ್ಥಾಪಿಸಿದೆ. ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರದ ಆಡಳಿತ ಕಚೇರಿಯನ್ನು ಬೆಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿ ರಾಜ್ಯ ಸರ್ಕಾರವು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಆಡಳಿತ ಮಂಡಳಿಯನ್ನು ರಚಿಸಿ ದಿನಾಂಕ:01.08.2014ರಂದು ಆದೇಶ ಹೊರಡಿಸಿರುತ್ತಾರೆ.<br><br>ರಾಜ್ಯ ಸರ್ಕಾರದಿಂದಲೇ ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರವನ್ನು ಸ್ಥಾಪಿಸಲು ನಿಯಮ ಮತ್ತು ನಿಬಂಧನೆಗಳನ್ನು ರೂಪಿಸಿ ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಮತ್ತು ಸಂಶೋಧನಾ ಕೇಂದ್ರವನ್ನು ಸಂಘ ಸಂಸ್ಥೆಗಳ ನೋಂದಣಿ ಕಾಯ್ದೆಯಡಿ ದಿನಾಂಕ: 01.11.2014ರಂದು ನೋಂದಣಿ ಮಾಡಿಸಲಾಗಿರುತ್ತದೆ.<br><br>ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರಕ್ಕೆ ಬೆಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ 3 ಎಕರೆ ಜಾಗವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸುಪರ್ದಿಗೆ ನೀಡಲು ಶಿಕ್ಷಣ ಇಲಾಖೆ ಸರ್ಕಾರದ ಆದೇಶ ಸಂಖ್ಯೆ: ಇಡಿ 415 ಯುಬಿವಿ 2014, ಬೆಂಗಳೂರು, ದಿನಾಂಕ: 9ನೇ ಡಿಸೆಂಬರ್ 2014ರಂದು ಆದೇಶ ಹೊರಡಿಸಿದೆ.<br><br>ಕೇಂದ್ರ ಸರ್ಕಾರವು ರಚಿಸಿರುವ ಭಾರತೀಯ ಭಾಷಾ ಸಂಸ್ಥಾನದ ಅಧ್ಯಯನ ಕೇಂದ್ರ ಮತ್ತು ರಾಜ್ಯ ಸರ್ಕಾರವು ಕೈಗೊಳ್ಳುವ ಶಾಸ್ತ್ರೀಯ ಭಾಷಾ ಅಧ್ಯಯನ ಚಟುವಟಿಕೆಗಳಲ್ಲಿ ಸಮನ್ವಯ ಸಾಧಿಸುವ ಸಲುವಾಗಿ ಈ ಸಮಿತಿಯಲ್ಲಿ ಕೇಂದ್ರ ಸರ್ಕಾರದಲ್ಲಿ ಒಬ್ಬ ಪ್ರತಿನಿಧಿಯನ್ನು ನಿಯೋಜಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>2011-12ನೇ ಸಾಲಿನಿಂದ 2017-18 ರವರೆಗೆ ಕೇಂದ್ರ ಸರ್ಕಾರದಿಂದ ನೇರವಾಗಿ ಮೈಸೂರಿನ ಭಾರತೀಯ ಭಾಷಾ ಸಂಸ್ಥಾನಕ್ಕೆ ಈ ಕೆಳಗಿನಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. |

| ಹಣಕಾಸು ವರ್ಷ | ಅನುದಾನದ ಮೊತ್ತ (ರೂ.ಗಳಲ್ಲಿ) |
|---|---|
| 2011-12 | 54,54,000 |
| 2012-13 | 2,18,00,000 |
| 2013-14 | 2,18,00,000 |
| 2014-15 | 1,00,00,000 |
| 2015-16 | 1,00,00,000 |
| 2016-17 | 1,00,00,000 |
| 2017-18 | 1,00,00,000 |
| **ಒಟ್ಟು** | **8,90,54,000** |

ರಾಜ್ಯ ಸರ್ಕಾರದಿಂದ ಕನ್ನಡ ಶಾಸ್ತ್ರೀಯ ಭಾಷಾ ಅಭಿವೃದ್ಧಿ ಯೋಜನೆಯಡಿ ರಾಜ್ಯ 10 ವಿಶ್ವವಿದ್ಯಾನಿಲಯಗಳಿಗೆ ತಲಾ ರೂ.1,00,00,000/-ಗಳನ್ನು ಉನ್ನತ ಶಿಕ್ಷಣ ಇಲಾಖೆ ಮೂಲಕ ಅನುದಾನ ಬಿಡುಗಡೆ ಮಾಡಲಾಗಿದೆ.

**ಉನ್ನತ ಶಿಕ್ಷಣ ಇಲಾಖೆ:**

ಕನ್ನಡ ವಿಶ್ವವಿದ್ಯಾಲಯ ಹಂಪಿಯ ವತಿಯಿಂದ ಕರ್ನಾಟಕದ ಒಳಗಿನ ಮತ್ತು ಹೊರಗಿನ ವ್ಯಾಪಕ ಕಾರ್ಯಕ್ಷೇತ್ರದ ಮೂಲಕ ಸಂಗ್ರಹ ಮಾಡಿ ಸುಮಾರು 17 ಸಂಪುಟಗಳನ್ನು ಹೊರತಂದಿರುತ್ತದೆ. ಕನ್ನಡದ ಮಹತ್ವದ ಲೇಖಕರನ್ನು, ಕಲಾವಿದರನ್ನು, ವಿಜ್ಞಾನಿಗಳನ್ನು ಹಾಗೂ ಸಾಹಿತ್ಯ ಮತ್ತು ಸಾಹಿತ್ಯೇತರವಾದ ಪ್ರಮುಖ ವಿಷಯಗಳ ಕುರಿತು ಜನ ಸಾಮಾನ್ಯರಿಗೆ ತಿಳುವಳಿಕೆ ನೀಡಲು ಪ್ರಚಾರೋಪನ್ಯಾಸಗಳನ್ನು ಮಾಡಿಸುವುದರ ಮೂಲಕ ಅತ್ಯಂತ ಸರಳವಾಗಿ ಪರಿಚಯ ಮಾಡಿಕೊಡುವ ಉದ್ದೇಶದಿಂದ ಮಂಟಪ ಮಾಲೆ ಯೋಜನೆಯನ್ನು ಹಮ್ಮಿಕೊಂಡಿದೆ. ಈ ಯೋಜನೆಗೆ ಸರ್ಕಾರದಿಂದ ರೂ.1.00ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ. ಈ ಯೋಜನೆಯ ಅಡಿಯಲ್ಲಿ 283 ಪುಸ್ತಕಗಳು ಪ್ರಕಟಗೊಂಡಿರುತ್ತದೆ.

ಇ) ಗಡಿನಾಡಿನ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಬಳಕೆಯನ್ನು ಕಡ್ಡಾಯವಾಗಿ ಕಲಿಸಲಾಗುತ್ತಿದೆಯೇ; ಕನ್ನಡ ಕಲಿಸುವ ಶಿಕ್ಷಕರು ಕೊರತೆ ಏನಾದರೂ ಇದೆಯೇ; (ಸಮಸ್ಯೆಗಳೇನಾದರೂ ಇದ್ದಲ್ಲಿ ತಿಳಿಸುವುದು)

- ಹೌದು, ಗಡಿನಾಡಿನ ಸರ್ಕಾರಿ ಶಾಲೆಗಳು ಸೇರಿದಂತೆ ರಾಜ್ಯಾದ್ಯಂತಹ ಎಲ್ಲ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಕಲಿಸಲಾಗುತ್ತಿದೆ.
- ಕನ್ನಡ ಭಾಷಾ ಶಿಕ್ಷಕರ ಕೊರತೆ ಇರುವುದಿಲ್ಲ. ಈಗಾಗಲೇ 2017ರಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಹ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಪರೀಕ್ಷೆ ನಡೆಸಿ, ಒಟ್ಟು 3389 ಹುದ್ದೆಗಳಿಗೆ ಈಗಾಗಲೇ ಆಯ್ಕೆ ಪ್ರಕಟಿಸಲಾಗಿದೆ.
- 2018-19ರಲ್ಲಿಯೂ 4000 ಶಿಕ್ಷಕರ ನೇಮಕಾತಿಗೆ ಈಗಾಗಲೇ ಸರ್ಕಾರದಿಂದ ಅನುಮೋದನೆ ದೊರೆತಿದ್ದು, ನೇಮಕಾತಿ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗುತ್ತಿದೆ.
- 2017-18ನೇ ಸಾಲಿನಲ್ಲಿ ರಾಜ್ಯಾದ್ಯಂತ ಖಾಲಿ ಇದ್ದ 1689 ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿದೆ.
- ಶೈಕ್ಷಣಿಕ ಹಿತದೃಷ್ಠಿಯನ್ನು ಗಮನಿಸಿ 2018-19ನೇ ಸಾಲಿನಲ್ಲಿ ಅಗತ್ಯ ಖಾಲಿ ಹುದ್ದೆಗಳಲ್ಲಿ ತಾತ್ಕಾಲಿಕವಾಗಿ ನೇಮಿಸಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ 228 ಪಿಬಿಎಸ್ 2018, ದಿನಾಂಕ: 14.06.2018 ರನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 19537 ಮತ್ತು ಪ್ರೌಢ ಶಾಲೆಗಳಲ್ಲಿ

| | | |
|---|---|---|
| | | 2697 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗಿದ್ದು, ಅದರಂತೆ ಕ್ರಮ ವಹಿಸಲಾಗಿದೆ.<br>1. ಕನ್ನಡ ಭಾಷಾ ಕಲಿಕಾ ಅಧಿನಿಯಮ-2015ರ ಅಡಿ ರಚಿಸಲಾದ ಕನ್ನಡ ಭಾಷಾ ಕಲಿಕೆ ನಿಯಮಗಳು-2017ರ ಪ್ರಕಾರ ಸಮಗ್ರವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>2. ರಾಜ್ಯದಲ್ಲಿನ ಎಲ್ಲಾ ಶಾಲೆಗಳಲ್ಲಿ, ಎಲ್ಲಾ ತರಗತಿಗಳಲ್ಲಿ ಪ್ರಥಮ ಭಾಷೆಯಾಗಿ ಆಗಲಿ ಅಥವಾ ದ್ವಿತೀಯ ಭಾಷೆಯಾಗಲೀ ಹಂತ ಹಂತವಾಗಿ , ಕಲಿಸಲು ಸೂಚನೆ ನೀಡಲಾಗಿರುತ್ತದೆ.<br>3. 2017-18ನೇ ಶೈಕ್ಷಣಿಕ ವರ್ಷದಿಂದ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಕಲಿಸಲು ಆರಂಭಿಸಲು ಹಾಗೂ 2018-19ನೇ ಶೈಕ್ಷಣಿಕ ವರ್ಷದಲ್ಲಿ 1 ಮತ್ತು 2ನೇ ತರಗತಿಗಳಲ್ಲಿ ಹಾಗೂ ಇದೇ ರೀತಿ 10ನೇ ತರಗತಿವರೆಗೆ ಕನ್ನಡ ಭಾಷೆಯ ಕಲಿಕೆಯನ್ನು ಹಂತ ಹಂತವಾಗಿ ವಿಸ್ತರಿಸಲು ಆದೇಶಿಸಲಾಗಿದೆ.<br>4. ಈ ಕುರಿತು ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕಡ್ಡಾಯವಾಗಿ ಬೋಧಿಸುವುದನ್ನು ಖಚಿತಪಡಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ವಿವರ ಈ ಕೆಳಕಂಡಂತಿದೆ:-<br>• ಪ್ರತಿಯೊಂದು ಶೈಕ್ಷಣಿಕ ಜಿಲ್ಲೆಯ ಉಪ ನಿರ್ದೇಶಕರು(ಆಡಳಿತ) ಸಾ.ಶಿ.ಇಲಾಖೆ ಇವರಿಗೆ 'ಪ್ರಾಥಮಿಕ ಶಾಲೆ'<br>• ನಿರ್ದೇಶಕರು (ಪ್ರೌಢ ಶಿಕ್ಷಣ) ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಬೆಂಗಳೂರು ಮತ್ತು ಮೈಸೂರು ವಿಭಾಗದ ಪ್ರೌಢಶಾಲೆಗಳಿಗೆ.<br>• ನಿರ್ದೇಶಕರು, ಸಾ.ಶಿ.ಇಲಾಖೆ, ಆಯಾ ಆಯುಕ್ತಾಲಯ ವಿಭಾಗದಲ್ಲಿರುವ ಪ್ರೌಢಶಾಲೆಗಳಿಗೆ<br>ಕನ್ನಡ ಭಾಷಾ ಕಲಿಕೆ ನಿಯಮಗಳು-2017ನ್ನು ಸಮಗ್ರವಾಗಿ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಸರಕಾರಿ ಹಾಗೂ ಅನುದಾನಿತ ಎಲ್ಲಾ ಪಠ್ಯಕ್ರಮದ ಶಾಲೆಗಳಿಗೆ (ಸಿ.ಬಿ.ಎಸ್.ಇ /ಐ.ಸಿ.ಎಸ್.ಇ ಇತರೆ ಮಂಡಳಿಗಳಿಂದ ಸಂಯೋಜನೆ ಪಡೆದ ಶಾಲೆಗಳನ್ನು ಒಳಗೊಂಡಂತೆ) ಪ್ರಥಮ ದ್ವಿತೀಯ ಭಾಷೆ ಪಠ್ಯಪುಸ್ತಕಗಳನ್ನು ಶಾಲಾ ಮಕ್ಕಳ ಸಂಖ್ಯೆಗೆ ಅನುಗುಣವಾಗಿ 2018-19ನೇ ಶೈಕ್ಷಣಿಕ ಸಾಲಿಗೆ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ. |
| ಈ) | ರಾಷ್ಟ್ರೀಯ ಭಾಷೆಯಾದ ಕನ್ನಡವನ್ನು ವಿಶೇಷವಾಗಿ ದಕ್ಷಿಣ ಭಾರತದ ರಾಜ್ಯಗಳಲ್ಲಿ ಕಲಿಸುತ್ತಿರುವ ಬಗ್ಗೆ ಮಾಹಿತಿ ನೀಡುವುದು. ವಿಶ್ವವಿದ್ಯಾಲಯ ಮಟ್ಟದಲ್ಲಿ ನೆರೆಯ ರಾಜ್ಯಗಳಲ್ಲಿ ಯಾವ ರೀತಿ ಅಧ್ಯಯನ ನಡೆದಿದೆ; ಕರ್ನಾಟಕ ಸರ್ಕಾರದಿಂದ ವಿಶೇಷ ಉತ್ತೇಜನಾ ಯೋಜನೆ ಇದೆಯೇ? | **<u>ಉನ್ನತ ಶಿಕ್ಷಣ ಇಲಾಖೆ:</u>**<br>ಕನ್ನಡ ವಿಶ್ವವಿದ್ಯಾಲಯವು ಸಂಶೋಧನಾ ಸಂಸ್ಥೆಗಳ ಜೊತೆಗೆ ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟ ಮತ್ತು ಸ್ಥಳೀಯ ಮಟ್ಟದ ವಿಚಾರಗಳನ್ನು/ಕಾಮಗಾರಿಗಳನ್ನು ನಿರಂತರವಾಗಿ ಹಮ್ಮಿಕೊಂಡು ರಾಜ್ಯದ ಒಳಗಿನ ಮತ್ತು ಹೊರಗಿನ, ಹಿರಿಯ/ಕಿರಿಯ ವಿದ್ವಾಂಸರ ಜೊತೆಗೆ ಸಂವಾದ ನಡೆಸುತ್ತಾ ಬಂದಿರುತ್ತದೆ.<br>**<u>ಕನ್ನಡ ಮತ್ತು ಸಂಸ್ಕೃತಿ ಇಲಾಖೆ:</u>**<br>ನೆರೆ ರಾಜ್ಯಗಳಾದ ಮದ್ರಾಸ್ ವಿಶ್ವವಿದ್ಯಾಲಯ ಮಧುರೈ-ಕಾಮರಾಜ್, ವಿ.ವಿ.ಆಂಧ್ರಪ್ರದೇಶದ ಕುಪ್ಪಂ ವಿಶ್ವವಿದ್ಯಾಲಯ, ತೆಲಂಗಾಣ ಉಸ್ಮಾನಿಯಾ ವಿ.ವಿ. ಮಹಾರಾಷ್ಟ್ರ, ಮುಂಬೈ |